**All India Radio: Bangalore**
**National Bulletin In Kannada**
**03.11.2025  19.35 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**03.11.2025  19.35 p.m.**
*****************

**ಮುಖ್ಯಾಂಶಗಳು**

1. **ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಇಂದು ಗ್ರಾಹಕನಲ್ಲ, ಪರಿವರ್ತಕ ಶಕ್ತಿ – ಪ್ರಧಾನಿ ನರೇಂದ್ರ ಮೋದಿ**
2. **ಬಿಹಾರ ಮೊದಲ ಹಂತದ ವಿಧಾನಸಭಾ ಚುನಾವಣೆ ಪ್ರಚಾರಕ್ಕೆ ನಾಳೆ ತೆರೆ**
3. **ಉತ್ತರಾಖಂಡ ವಿಧಾನಸಭೆಯ ವಿಶೇಷ ಅಧಿವೇಶನ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು**
4. **ದೇಶಾದ್ಯಂತ 550 ಜಿಲ್ಲೆಗಳಲ್ಲಿ 1 ಸಾವಿರದ 400ಕ್ಕೂ ಹೆಚ್ಚು ಹಾಕಿ ಪಂದ್ಯಾವಳಿ ಆಯೋಜನೆ – ಸಚಿವ ಮನ್ಸೂಖ್ ಮಾಂಡವೀಯ**

*****************

ದೇಶವು ಈಗ ತಂತ್ರಜ್ಞಾನದ ಗ್ರಾಹಕನಾಗುವ ಬದಲು ತಾಂತ್ರಿಕ ಪರಿವರ್ತನೆಯಲ್ಲಿ ಪ್ರವರ್ತಕವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

ಇಂದು ಬೆಳಿಗ್ಗೆ ನವದೆಹಲಿಯ ಭಾರತ್ ಮಂಟಪದಲ್ಲಿ ಉದಯೋನ್ಮುಖ ವಿಜ್ಞಾನ ಮತ್ತು ತಂತ್ರಜ್ಞಾನ ನಾವೀನ್ಯತೆ ಸಮಾವೇಶ 2025 ಅನ್ನು ಉದ್ಘಾಟಿಸಿದ ನಂತರ ಪ್ರಧಾನಿ ಈ ವಿಷಯ ತಿಳಿಸಿದರು. ದೇಶದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪರಿಸರ ವ್ಯವಸ್ಥೆಗೆ ಪ್ರಮುಖ ಉತ್ತೇಜನ ನೀಡಲು ಒಂದು ಲಕ್ಷ ಕೋಟಿ ರೂಪಾಯಿ ಮೌಲ್ಯದ ಸಂಶೋಧನಾ ಅಭಿವೃದ್ಧಿ ಮತ್ತು ನಾವೀನ್ಯತೆ ಯೋಜನೆ ನಿಧಿಯನ್ನು ಪ್ರಧಾನಿ ಉದ್ಘಾಟಿಸಿದರು.

ದೇಶದಲ್ಲಿ ಆಧುನಿಕ ನಾವೀನ್ಯತೆ ವ್ಯವಸ್ಥೆಯನ್ನು ನಿರ್ಮಿಸಲು ಸರ್ಕಾರವು ಸಂಶೋಧನೆಯನ್ನು ಸುಲಭಗೊಳಿಸುವತ್ತ ಗಮನಹರಿಸುತ್ತಿದೆ ಎಂದು ಪ್ರಧಾನಿ ಹೇಳಿದರು.

*****************

ಬಿಹಾರದಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಗೆ ನಾಳೆ ಸಂಜೆ ಪ್ರಚಾರ ಕೊನೆಗೊಳ್ಳಲಿದೆ. ಈ ಹಂತದ ಮತದಾನ ಇದೇ 6 ರಂದು 18 ಜಿಲ್ಲೆಗಳ 121 ಕ್ಷೇತ್ರಗಳಲ್ಲಿ ನಡೆಯಲಿದೆ. ಎರಡೂ ಪ್ರಮುಖ ಮೈತ್ರಿಕೂಟಗಳಾದ ಎನ್‌ಡಿಎ ಮತ್ತು ಮಹಾಘಟಬಂಧನ್‌ನ ಪ್ರಮುಖ ನಾಯಕರು ಮತದಾರರನ್ನು ಸೆಳೆಯಲು ರಾಜ್ಯಾದ್ಯಂತ ಸತತ ರ್‍ಯಾಲಿಗಳನ್ನು ನಡೆಸುತ್ತಿದ್ದಾರೆ.

ಹಿರಿಯ ಬಿಜೆಪಿ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಸಹರ್ಸಾ ಮತ್ತು ಕತಿಹಾರ್‌ನಲ್ಲಿ ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಮಾತನಾಡಿದರು. 2014 ರಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದಾಗ, ನಳಂದದ ವೈಭವವನ್ನು ಪುನಃಸ್ಥಾಪಿಸಲು ಅಭಿಯಾನವನ್ನು ಪ್ರಾರಂಭಿಸಿತು ಎಂದ ಅವರು, ನಳಂದ ವಿಶ್ವವಿದ್ಯಾಲಯಕ್ಕೆ ಭವ್ಯವಾದ ಕ್ಯಾಂಪಸ್ ನಿರ್ಮಿಸಲು ಕಳೆದ ದಶಕದಲ್ಲಿ ಸರ್ಕಾರ 2 ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದೆ ಎಂದು ಹೇಳಿದರು.

ಹಿರಿಯ ಬಿಜೆಪಿ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಸೀತಾಮರ್‌ಹಿಯಲ್ಲಿ ಸಾರ್ವಜನಿಕ ರ್‍ಯಾಲಿ ನಡೆಸಿದರು. ದೇಶದಲ್ಲಿ ಭಯೋತ್ಪಾದನೆಯನ್ನು ಕೊನೆಗೊಳಿಸಲು ಕಳೆದ ದಶಕದಲ್ಲಿ ಎನ್‌ಡಿಎ ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಅವರು ಹೇಳಿದರು.

ಆರ್‌ಜೆಡಿ ನಾಯಕ ಮತ್ತು ಮಹಾಘಟಬಂಧನ್‌ನ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಪ್ರಸಾದ್ ಯಾದವ್ ಭೋಜ್‌ಪುರದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದರು. ಈ ಬಾರಿ ಬಿಹಾರದಲ್ಲಿ ರಾಜಕೀಯ ಬದಲಾವಣೆ ಖಚಿತ ಎಂದು ಅವರು ಹೇಳಿದ್ದಾರೆ.

ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ರೋಸೆರಾದಲ್ಲಿ ರೋಡ್ ಶೋ ನಡೆಸಿದರು.

****************

ಉತ್ತರಾಖಂಡ ರಾಜ್ಯ ವಿಧಾನಸಭೆಯ ವಿಶೇಷ ಅಧಿವೇಶನವನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಮಾತನಾಡಿದರು. ರಾಜ್ಯದ ಎಲ್ಲಾ ನಾಗರಿಕರು ಮತ್ತು ಶಾಸಕರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತಾ, ಕಳೆದ 25 ವರ್ಷಗಳಲ್ಲಿ ಉತ್ತರಾಖಂಡದ ಗಮನಾರ್ಹ ಸಾಧನೆಗಳನ್ನು ಅವರು ಶ್ಲಾಘಿಸಿದರು. ಸಮಗ್ರ ಅಭಿವೃದ್ಧಿ ಪ್ರಯತ್ನಗಳ ಪರಿಣಾಮವಾಗಿ, ರಾಜ್ಯದಲ್ಲಿ ಮಾನವ ಅಭಿವೃದ್ಧಿ ಸೂಚ್ಯಂಕದ ಹಲವಾರು ನಿಯತಾಂಕಗಳಲ್ಲಿ ಸುಧಾರಣೆ ಕಂಡುಬಂದಿದೆ ಎಂದು ಅವರು ಹೇಳಿದರು.

ಹೆಚ್ಚುತ್ತಿರುವ ಸಾಕ್ಷರತಾ ದರದ ಬಗ್ಗೆ ಸಂತೋಷ ವ್ಯಕ್ತಪಡಿಸಿದ ರಾಷ್ಟ್ರಪತಿಗಳು, ರಾಜ್ಯದಲ್ಲಿ ಮಹಿಳಾ ಶಿಕ್ಷಣದ ವ್ಯಾಪ್ತಿ ವಿಸ್ತರಿಸಿದೆ. ತಾಯಿ ಮತ್ತು ಶಿಶು ಮರಣ ಪ್ರಮಾಣಗಳಲ್ಲಿ ಇಳಿಕೆ ಕಂಡುಬಂದಿದೆ ಮತ್ತು ಸರ್ಕಾರವು ಆರೋಗ್ಯ ಸೇವೆಗಳನ್ನು ಹೆಚ್ಚು ಸುಲಭವಾಗಿಸಲು ಪ್ರಯತ್ನಿಸುತ್ತಿದೆ ಎಂದು ಅವರು ಹೇಳಿದರು.

ಪರಿಸರ, ಇಂಧನ, ಪ್ರವಾಸೋದ್ಯಮ, ಆರೋಗ್ಯ, ಶಿಕ್ಷಣ, ಮಹಿಳಾ ಸಬಲೀಕರಣ ಮತ್ತು ಕೈಗಾರಿಕಾ ಅಭಿವೃದ್ಧಿ ಕ್ಷೇತ್ರಗಳಲ್ಲಿ ರಾಜ್ಯದ ಗಮನಾರ್ಹ ಪ್ರಗತಿಯನ್ನು ರಾಷ್ಟ್ರಪತಿಗಳು ಎತ್ತಿ ತೋರಿಸಿದರು.

****************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಮಾದಕ ವಸ್ತುಗಳ ವಿರುದ್ಧದ ಹೋರಾಟದಲ್ಲಿ ವಿದ್ಯಾರ್ಥಿಗಳು ಒಂದಾಗಬೇಕೆಂದು ಕರೆ ನೀಡಿದ್ದಾರೆ. ಇಂದು ಕೇರಳದ ಕೊಲ್ಲಂನ ಫಾತಿಮಾ ಮಾತಾ ರಾಷ್ಟ್ರೀಯ ಕಾಲೇಜಿನ ವಜ್ರಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಜೀವನದುದ್ದಕ್ಕೂ ಶಿಸ್ತನ್ನು ಕಾಪಾಡಿಕೊಳ್ಳಬೇಕು ಮತ್ತು ಎಲ್ಲಾ ವಿಷಯಗಳಲ್ಲಿ ಸ್ವಯಂ ನಿಯಂತ್ರಣವನ್ನು ಹೊಂದಿರಬೇಕು ಎಂದು ಉಪರಾಷ್ಟ್ರಪತಿ  ಒತ್ತಾಯಿಸಿದ್ದಾರೆ.

2047 ರ ವೇಳೆಗೆ ವಿಕಸಿತ ಭಾರತಕ್ಕಾಗಿ ಪ್ರಧಾನಮಂತ್ರಿ ಕರೆಯನ್ನು ಉಲ್ಲೇಖಿಸಿ, ಉಪರಾಷ್ಟ್ರಪತಿಗಳು, ಫಾತಿಮಾ ಮಾತಾ ರಾಷ್ಟ್ರೀಯ ಕಾಲೇಜು 2047ರ ನಂತರ ಮೂರು ವರ್ಷಗಳಲ್ಲಿ ತನ್ನ ಶತಮಾನೋತ್ಸವವನ್ನು ಆಚರಿಸಲಿದೆ ಮತ್ತು ಆತ್ಮನಿರ್ಭರ ಭಾರತಕ್ಕೆ ಕೊಡುಗೆಗಳ ಮೂಲಕ ಅದರ ಮುಂದಿನ ಅಧ್ಯಾಯನ ಇನ್ನಷ್ಟು ಉಜ್ವಲವಾಗಲಿದೆ ಎಂದು ಹೇಳಿದರು.

ಕೇರಳ ರಾಜ್ಯಪಾಲ ರಾಜೇಂದ್ರ ಪ್ರಸಾದ್ ಅರ್ಲೇಕರ್, ಕೇಂದ್ರ ರಾಜ್ಯ ಸಚಿವ ಸುರೇಶ್ ಗೋಪಿ ಮತ್ತು ಕೇರಳ ಹಣಕಾಸು ಸಚಿವ ಕೆ ಎನ್ ಬಾಲಗೋಪಾಲ್ ಕೂಡ ಈ ಸಂದರ್ಭದಲ್ಲಿ ಮಾತನಾಡಿದರು.

ಉಪರಾಷ್ಟ್ರಪತಿ ಸಂಜೆ ರಾಜ್ಯ ರಾಜಧಾನಿ ತಿರುವನಂತಪುರಂಗೆ ಮರಳುವ ಮೊದಲು ಭಾರತೀಯ ತೆಂಗಿನಕಾಯಿ ರಫ್ತುದಾರರ ಸಂಘಗಳ ಒಕ್ಕೂಟದ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

****************

ಆಕಾಶವಾಣಿಯ ದ್ವಿಭಾಷಾ ಲೈವ್ ಫೋನ್-ಇನ್ ಕಾರ್ಯಕ್ರಮದಲ್ಲಿ, ನವೆಂಬರ್ 1 ರಿಂದ ಜಾರಿಗೆ ಬರುವ ಬ್ಯಾಂಕಿಂಗ್ ಕಾನೂನುಗಳು –ತಿದ್ದುಪಡಿ ಕಾಯ್ದೆ, 2025: ಪ್ರಮುಖ ಬದಲಾವಣೆಗಳ ಕುರಿತ ಚರ್ಚೆಯನ್ನು ಪ್ರಸಾರ ಮಾಡುತ್ತಿದೆ.

ಕಾರ್ಯಕ್ರಮದ ಸಮಯದಲ್ಲಿ, ಜಾರಿಗೆ ಬಂದಿರುವ ಹೊಸ ಬ್ಯಾಂಕಿಂಗ್ ನಿಯಮಗಳು ಮತ್ತು ಸಾಮಾನ್ಯ ಜನರ ಮೇಲೆ ಅವುಗಳ ಪ್ರಭಾವದ ಬಗ್ಗೆ ಕೇಳಬಹುದು.

ಭಾಗವಹಿಸಲು 011 – 23310481, 011– 23717117, 011– 23717106 ಮತ್ತು 011 – 23314444, ಇಂದು ರಾತ್ರಿ 9:30 ರಿಂದ ದೂರವಾಣಿ ಸಂಖ್ಯೆಗಳನ್ನು ಡಯಲ್ ಮಾಡಿ.

ಪರ್ಯಾಯವಾಗಿ, ನೀವು ನಿಮ್ಮ ಪ್ರಶ್ನೆಗಳನ್ನು ವಾಟ್ಸಾಪ್ ಮೂಲಕ 9289094044 ಸಂಖ್ಯೆಗೆ ಕಳುಹಿಸಬಹುದು ಅಥವಾ ನಿಮ್ಮ ಪ್ರಶ್ನೆಗಳನ್ನು X ನಲ್ಲಿ AskAir ಹ್ಯಾಶ್‌ಟ್ಯಾಗ್‌ನೊಂದಿಗೆ ಪೋಸ್ಟ್ ಮಾಡಬಹುದು.

****************

ಇದೇ ತಿಂಗಳ 7 ರಂದು ದೇಶಾದ್ಯಂತ 550ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ 1 ಸಾವಿರದ 400ಕ್ಕೂ ಹೆಚ್ಚು ಹಾಕಿ ಪಂದ್ಯಾವಳಿಗಳನ್ನು ಆಯೋಜಿಸಲಾಗುವುದು ಎಂದು ಕ್ರೀಡಾ ಮತ್ತು ಯುವಜನ ವ್ಯವಹಾರಗಳ ಸಚಿವ ಡಾ. ಮನ್ಸುಖ್ ಮಾಂಡವಿಯ ಹೇಳಿದ್ದಾರೆ.

ಇಂದು ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಈ ಉಪಕ್ರಮ ಆಟದ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸುವುದು ಮತ್ತು ಯುವ ಆಟಗಾರರನ್ನು ಕ್ರೀಡೆಯತ್ತ ಸೆಳೆಯುವ ಹಾಗೂ ದೇಶದ ಕ್ರೀಡಾ ಸಂಸ್ಕೃತಿಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದರು.

ಇದು ಯುವಕರು ಹಾಕಿಯ ಇತಿಹಾಸ ತಿಳಿದುಕೊಳ್ಳಲು ಮತ್ತು ಅದರ ಭವಿಷ್ಯವನ್ನು ರೂಪಿಸಲು ಕೊಡುಗೆ ನೀಡಲು ಪ್ರೇರೇಪಿಸುತ್ತದೆ ಎಂದ ಸಚಿವರು, ಶತಮಾನೋತ್ಸವ ಆಚರಣೆಯು ಭಾರತದ ರಾಷ್ಟ್ರೀಯ ಗುರುತು ಮತ್ತು ಶ್ರೇಷ್ಠತೆಯ ಸಂಕೇತವಾಗಿರುವ ಕ್ರೀಡೆಗೆ ಸಂದ ಗೌರವವಾಗಿದೆ ಎಂದು ಹೇಳಿದರು.

****************

ಕೇಂದ್ರ ರೈಲ್ವೆ ಮತ್ತು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಅವರು ಇಂದು ಗಾಂಧಿನಗರದಲ್ಲಿ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿದರು.

ಸಭೆಯಲ್ಲಿ ಅವರು, ರಾಜ್ಯದ ಪ್ರಮುಖ ಸೆಮಿಕಂಡಕ್ಟರ್ ಮತ್ತು ಡಿಸ್ಪ್ಲೇ ಫ್ಯಾಬ್ರಿಕೇಶನ್ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದರು. ಉಪಮುಖ್ಯಮಂತ್ರಿ ಹರ್ಷ ಸಾಂಘ್ವಿ, ಹಿರಿಯ ಸರ್ಕಾರಿ ಅಧಿಕಾರಿಗಳು ಮತ್ತು ಟಾಟಾ, ಮೈಕ್ರಾನ್ ಮತ್ತು ಸಿಜಿ ಸೆಮಿಕಾನ್‌ನಂತಹ ಪ್ರಮುಖ ಕಂಪನಿಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಸಭೆಯ ನಂತರ, ಸಚಿವರು ಅಹಮದಾಬಾದ್‌ನಲ್ಲಿರುವ ಹೈ ಸ್ಪೀಡ್ ರೈಲು ನಿಲ್ದಾಣ ಸ್ಥಳಕ್ಕೆ ಭೇಟಿ ನೀಡಿ ಅಹಮದಾಬಾದ್ ರೈಲು ನಿಲ್ದಾಣದ ಕಾಮಗಾರಿ ಪ್ರಗತಿಯನ್ನು ಪರಿಶೀಲಿಸಿದರು.

****************

ಸಂವಹನ ಸಚಿವಾಲಯದ ಅಂಚೆ ಇಲಾಖೆಯು ಕಳೆದ ಅಕ್ಟೋಬರ್ 2 ರಿಂದ 31 ರವರೆಗೆ ನಡೆಸಲಾದ ವಿಶೇಷ ಅಭಿಯಾನ 5.0 ಅನುಷ್ಠಾನ ಹಂತವನ್ನು ಮುಕ್ತಾಯಗೊಳಿಸಿತು. ಈ ಅಭಿಯಾನದ ಅಡಿಯಲ್ಲಿ, ಸಂವಹನ ಸಚಿವಾಲಯವು 23 ಸಾವಿರ ಚದರ ಅಡಿಗಳಿಗಿಂತ ಹೆಚ್ಚು ವಿಸ್ತೀರ್ಣದ ಕಚೇರಿ ಸ್ಥಳ ಮತ್ತು ತ್ಯಾಜ್ಯ ವಸ್ತುಗಳ ಮಾರಾಟದಿಂದ 57 ಲಕ್ಷ ರೂಪಾಯಿಗಳಿಗೂ ಹೆಚ್ಚಿನ ಆದಾಯ ಗಳಿಸಿದೆ.

*****************